**ದಿನಾಂಕ: 04.01.2021 ರಂದು ಬೆಳಿಗ್ಗೆ 10–30ಗಂಟೆಗೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್–178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್–178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್–19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 178ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್ಬಿ ಅಭಿಯಂತರರು |
| **ಸದಸ್ಯರುಗಳು** | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| **ಸದಸ್ಯರುಗಳು** | ಸಹಾಯಕ ಅಭಿಯಂತರರು, (ಬೀದಿ ದೀಪ ನಿರ್ವಹಣೆಗಾರರು) |
| **ಸದಸ್ಯರುಗಳು** | ಅರಣ್ಯ ಇಲಾಖೆ ಅಧಿಕಾರಿಗಳು |
| **ಸದಸ್ಯರುಗಳು** | ಪ್ರಕಾಶ್ .ಆರ್, ಮಾರ್ಷಲ್ |
| **ಸದಸ್ಯರುಗಳು** | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| **ಸಾರ್ವಜನಿಕರು** | ತೇಜಸ್ವಿನಿ .ಎಸ್, ಸೋಷಿಯಲ್ ವರ್ಕರ್ |
| **ಸಾರ್ವಜನಿಕರು** | ಡಿ. ಅಮರ್‌ನಾಥ್ |

## :ನಡಾವಳಿಯ ವರದಿ:

- 20ನೇ ಮುಖ್ಯರಸ್ತೆ, ಜೆ.ಪಿ.ನಗರ 2ನೇ ಹಂತದ ಧನ್ವಂತರಿ ಪಾರ್ಕಿನ ಹಿಂಭಾಗದಲ್ಲಿರುವ ಕಸದ ರಾಶಿಯನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

- 15ನೇ ಅಡ್ಡರಸ್ತೆ ವಿಇಟಿ ಆಟದ ಮೈದಾನ ಹಾಗೂ ದುರ್ಗಾ ಪರಮೇಶ್ವರಿ ದೇವಸ್ಥಾನದ ಆಟದ ಮೈದಾನದಲ್ಲಿ ಸಾರ್ವಜನಿಕರ ಶೌಚಾಲಯಕ್ಕೆ ಈಗಾಗಲೇ ಅನುಮೋದನೆಯಾಗಿದ್ದು, ಕಾಮಗಾರಿ ಕೈಗೊಳ್ಳುವುದಾಗಿ ವಾರ್ಡ್ ಇಂಜಿನಿಯರ್ ತಿಳಿಸಿರುತ್ತಾರೆ.

- 12ನೇ ಅಡ್ಡರಸ್ತೆ, ಎಸ್.ಎನ್. ಹೋಟೆಲ್ ಹತ್ತಿರ ಧೂಮಪಾನ ಹಾಗೂ ತಿಂಡಿಯನ್ನು ರಸ್ತೆಬದಿಯಲ್ಲಿಯೇ ಕುಳಿತು ತಿನ್ನುತ್ತಿರುವುದರ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ.

- 17ನೇ ಮುಖ್ಯರಸ್ತೆ, 14ನೇ ಅಡ್ಡರಸ್ತೆಯ ಕಾರ್ನರ್‌ನಲ್ಲಿ ಮಟನ್ ಮತ್ತು ಚಿಕನ್ ಅಂಗಡಿಯನ್ನು ನಡೆಸುತ್ತಿರುವವರು ಮೂಳೆ–ಮಾಂಸಗಳನ್ನು ಚರಂಡಿ ಮೋರಿಯಲ್ಲಿ ಹಾಕುತ್ತಿರುವವರ ಮೇಲೆ ಕ್ರಮ ಕೈಗೊಳ್ಳಲಾಗಿರುತ್ತದೆ.

**ಪು.ತಿ.ನೋ.**

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 16ನೇ ಅಡ್ಡರಸ್ತೆ ಮತ್ತು 19ನೇ ಬಿ ಮುಖ್ಯರಸ್ತೆ, 5ನೇ ಹಂತ ಜೆ.ಪಿ.ನಗರದ ರಸ್ತೆಗಳಲ್ಲಿ ಭಾಗಿರುವ ಮರದ ರೆಂಬೆ-ಕೊಂಬೆಗಳನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತು.

- 9ನೇ ಅಡರಸ್ತೆ ಮತ್ತು 18ನೇ ಮುಖ್ಯರಸ್ತೆ ಜಂಕ್ಷನ್, ವೈಶ್ಯ ಬ್ಯಾಂಕ್ ಕಾಲೋನಿ ಹತ್ತಿರ ಗುಂಡಿ ಬಿದ್ದಿರುವುದನ್ನು ಸರಿಪಡಿಸುವಂತೆ ಸೂಚಿಸಲಾಯಿತು.

- 21ನೇ ಮುಖ್ಯರಸ್ತೆಯ 10ನೇ ಅಡ್ಡರಸ್ತೆ ಮತ್ತು 12ನೇ ಅಡ್ಡರಸ್ತೆ, ಜೆ.ಪಿ.ನಗರ 2ನೇ ಹಂತದಲ್ಲಿ ಪಾದಚಾರಿ ಮಾರ್ಗವನ್ನು ಸಮತಟ್ಟು ಮಾಡಲು ಹಾಗೂ 20ನೇ ಮುಖ್ಯರಸ್ತೆಯ ಚರಂಡಿ ಮೋರಿಯ ಸ್ಲ್ಯಾಬ್‌ಗಳು ಹಾಳಾಗಿದ್ದು, ಅವುಗಳನ್ನು ಬದಲಿಸುವಂತೆ ಸೂಚಿಸಲಾಯಿತು.

- ಧನ್ವಂತರಿ ಉದ್ಯಾನವನದಲ್ಲಿ ಸೆಕ್ಯುರಿಟಿ ಗಾರ್ಡ್, ಸಹಾಯವಾಣಿ ನಂಬರ್‌ನ ನಾಮಫಲಕ ಹಾಗೂ ಉದ್ಯಾನವನದ ಗೇಟಿನ ಮುಂಭಾಗದಲ್ಲಿ ಮಾರ್ಷಲ್‌ರವರನ್ನು ನೇಮಿಸಿ, ಉದ್ಯಾನವಕ್ಕೆ ಬರುವ ಸಾರ್ವಜನಿಕರು ಮಾಸ್ಕ್ ಧರಿಸುವಂತೆ ಅರಿವು ಮೂಡಿಸುವಂತೆ, ಪಾರ್ಕ್‌ನಲ್ಲಿ ಕಾಲುಹಾದಿಯನ್ನು ಸ್ವಚ್ಛತೆಯಿಂದ ಇಡಲು ಸೂಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ರಾಮು .ಎಸ್, ವಾರ್ಡ್ 178 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧ್ಯಕ್ಷರು**
**ವಾರ್ಡ್ ಸಮಿತಿ, ವಾರ್ಡ್ ನಂ. 178**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**